# ಕರ್ನಾಟಕ ವಿಧಾನ ಪರಿಷತ್ತು
## ನೂರ ಐವತ್ತೇಳನೆಯ ಅಧಿವೇಶನ

## ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–88)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ;

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 3ನೇ ಪ್ರಕರಣದ (2)ನೇ ಉಪಪ್ರಕರಣದ (ಬಿ) ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಬಿ-1) ಮೇಲಿನದಕ್ಕೆ ಹೆಚ್ಚುವರಿಯಾಗಿ, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ, ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಒಬ್ಬ ವ್ಯಕ್ತಿ:

(ಬಿ-1) ಮೇಲಿನದಕ್ಕೆ ಹೆಚ್ಚುವರಿಯಾಗಿ, ರಾಜ್ಯ ಸರ್ಕಾರವು ನಾಮನಿರ್ದೇಶಿಸುವ ಒಬ್ಬ ವ್ಯಕ್ತಿಯು ಮಹಿಳೆಯಾಗಿರತಕ್ಕದ್ದು."

**3. ಪ್ರಕರಣ 8ರ ತಿದ್ದುಪಡಿ.-** ಮೂಲ ಅಧಿನಿಯಮದ 8ನೇ ಪ್ರಕರಣದ (ಇ) ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಎಫ್) ಸರ್ಕಾರದಿಂದ ಹೊಸ ದತ್ತಾಂಶ ಅಥವಾ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ಅನುಸೂಚಿತ ಜಾತಿಗಳ ಸದಸ್ಯರಿಗೆ ಉಪ-ವರ್ಗೀಕರಣದ ಶೇಕಡವಾರು ಮೀಸಲಾತಿಯಲ್ಲಿ ಅಗತ್ಯ ಮಾರ್ಪಾಡನ್ನು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಈ ಮುಂದಿನವುಗಳಿಗಾಗಿ,-

(i) ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಸದಸ್ಯರನ್ನಾಗಿ ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಒಬ್ಬ ವ್ಯಕ್ತಿಯನ್ನು ಹಾಗೂ ಒಬ್ಬ ಮಹಿಳೆಯನ್ನು ನಾಮನಿರ್ದೇಶಿಸಲು; ಮತ್ತು

(ii) ಸರ್ಕಾರದಿಂದ ಹೊಸ ದತ್ತಾಂಶ ಅಥವಾ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ಅನುಸೂಚಿತ ಜಾತಿಗಳ ಸದಸ್ಯರಿಗೆ ಉಪ-ವರ್ಗೀಕರಣದ ಶೇಕಡವಾರು ಮೀಸಲಾತಿಯಲ್ಲಿ ಅಗತ್ಯ ಮಾರ್ಪಾಡನ್ನು ಮಾಡಲು ಶಿಫಾರಸ್ಸು ಮಾಡುವಂತೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗಕ್ಕೆ ಅಧಿಕಾರವನ್ನು ನೀಡಲು,

- ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ವಾರ್ಷಿಕವಾಗಿ ಹನ್ನೆರಡು ಲಕ್ಷದ ಎಪ್ಪತ್ತೆರಡು ಸಾವಿರ ರೂಪಾಯಿಗಳ ಅಂದಾಜು ಆವರ್ತಕ ವೆಚ್ಚವು ಉಂಟಾಗುವುದು.

**ಡಾ. ಹೆಚ್.ಸಿ ಮಹದೇವಪ್ಪ**
ಸಮಾಜ ಕಲ್ಯಾಣ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ
## ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧಿನಿಯಮ, 2002 (2002ರ ಕರ್ನಾಟಕ ಅಧಿನಿಯಮ 20)ರ ಉದ್ಧೃತ ಭಾಗ

**XXX XXX XXX**

**3. ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ರಚನೆ.-**

**XXX XXX XXX**

(2) ಆಯೋಗವು ಈ ಮುಂದಿನ ಸದಸ್ಯರುಗಳನ್ನು ಹೊಂದಿರತಕ್ಕದ್ದು, ಎಂದರೆ,-

(ಎ) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತನಾದ, ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ವಿಶೇಷ ಜ್ಞಾನವುಳ್ಳ ಒಬ್ಬ ಅಧ್ಯಕ್ಷ;

(ಬಿ) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ, ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ವಿಶೇಷ ಜ್ಞಾನವುಳ್ಳ ಇಬ್ಬರು ವ್ಯಕ್ತಿಗಳು;

**XXX XXX XXX**

**8. ಆಯೋಗದ ಪ್ರಕಾರ್ಯಗಳು.-** ಆಯೋಗದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು, ಎಂದರೆ:-

(ಎ) ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಕಲ್ಯಾಣ ಮತ್ತು ಸಂರಕ್ಷಣೆಗಾಗಿ ಭಾರತ ಸಂವಿಧಾನದಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಇತರ ಯಾವುದೇ ಕಾನೂನಿನಲ್ಲಿ ಅಥವಾ ಸರ್ಕಾರದ ಯಾವುದೇ ಆದೇಶದ ಅಡಿಯಲ್ಲಿ ಉಪಬಂಧಿಸಲಾದ ವಿವಿಧ ರಕ್ಷಾಕ್ರಮಗಳ ಕಾರ್ಯಕ್ಷಮತೆಯನ್ನು ಪರಿಶೋಧಿಸುವುದು ಮತ್ತು ಪರೀಕ್ಷಿಸುವುದು; ಮತ್ತು

(ಬಿ) ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿರುವವರನ್ನು ಅವರ ಹಕ್ಕುಗಳಿಂದ ಮತ್ತು ಸಂರಕ್ಷಣೆಯಿಂದ ವಂಚಿತಗೊಳಿಸಿರುವುದಕ್ಕೆ ಸಂಬಂಧಿಸಿದ ನಿರ್ದಿಷ್ಟ ದೂರುಗಳನ್ನು ವಿಚಾರಿಸುವುದು ಮತ್ತು ಅಂಥ ವಿಷಯದ ಬಗ್ಗೆ ಸೂಕ್ತ ಪ್ರಾಧಿಕಾರಗಳನ್ನು ಸಂಪರ್ಕಿಸುವುದು;

(ಸಿ) ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಸಾಮಾಜಿಕ - ಆರ್ಥಿಕ ಅಭಿವೃದ್ಧಿಯ ಯೋಜನಾ ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಮತ್ತು ಆ ಬಗ್ಗೆ ಸಲಹೆಗಳನ್ನು ನೀಡುವುದು ಮತ್ತು ರಾಜ್ಯದಲ್ಲಿ ಅವರ ಅಭಿವೃದ್ಧಿಯಲ್ಲಾದ ಪ್ರಗತಿಯ ಮೌಲ್ಯನಿರ್ಣಯ ಮಾಡುವುದು;

(ಡಿ) ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಸಂರಕ್ಷಣೆ, ಕಲ್ಯಾಣ ಮತ್ತು ಸಾಮಾಜಿಕ-ಆರ್ಥಿಕ ಅಭಿವೃದ್ಧಿಗಾಗಿ ರಕ್ಷಾಕ್ರಮಗಳನ್ನು ಮತ್ತು ಇತರೆ ಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕಾಗಿ ರಾಜ್ಯಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಶಿಫಾರಸು ಮಾಡುವುದು ಮತ್ತು ವಾರ್ಷಿಕವಾಗಿ ಮತ್ತು ಆಯೋಗವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಇತರೆ ಸಮಯದಲ್ಲಿ ರಾಜ್ಯಸರ್ಕಾರಕ್ಕೆ ವರದಿ ಸಲ್ಲಿಸುವುದು.

(ಇ) ನಿಯಮಿಸಬಹುದಾದಂತೆ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಸಂರಕ್ಷಣೆ, ಕಲ್ಯಾಣ, ಅಭಿವೃದ್ಧಿ ಮತ್ತು ಪ್ರಗತಿಗೆ ಸಂಬಂಧಪಟ್ಟಂತೆ ಅಂಥ ಇತರೆ ಪ್ರಕಾರ್ಯಗಳನ್ನು ನಿರ್ವಹಿಸುವುದು:

ಪರಂತು, ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ವಿಷಯದ ಬಗ್ಗೆ, ಭಾರತ ಸಂವಿಧಾನದ 338ನೇ ಅನುಚ್ಛೇದದ ಅಡಿಯಲ್ಲಿ ಸ್ಥಾಪಿಸಲಾದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ರಾಷ್ಟ್ರೀಯ ಆಯೋಗವು ವ್ಯವಹರಿಸುತ್ತಿದ್ದರೆ, ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ರಾಜ್ಯ ಆಯೋಗವು ಅಂಥ ವಿಷಯದ ಮೇಲೆ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವುದು ನಿಂತುಹೋಗತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 75, ಪ್ರತಿಗಳು 250, 17ನೇ ಡಿಸೆಂಬರ್ 2025